ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 22 ಯುಟಿವಿ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:22-12-2018.

ಇಂದ
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ),
ಬೆಂಗಳೂರು – 560 001.

ಇವರಿಗೆ:

ಕುಲಸಚಿವರು,
ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ,
**ಬೆಳಗಾಂ-590 014.**

ಮಾನ್ಯರೆ,

ವಿಷಯ: **ಬೆಂಗಳೂರಿನ ಶ್ರೀ ವೆಂಕಟೇಶ್ವರ ಕಾಲೇಜ್ ಆಫ್ ಇಂಜಿನಿಯರಿಂಗ್ ಕಾಲೇಜಿನಲ್ಲಿ ಹಾಲಿ ಅಸ್ತಿತ್ವದಲ್ಲಿರುವ ಕೋರ್ಸುಗಳಿಗೆ ಶಾಶ್ವತ ಸಂಯೋಜನೆ ನೀಡುವ ಬಗ್ಗೆ.**

ಉಲ್ಲೇಖ: ತಮ್ಮ ಪತ್ರ ಸಂಖ್ಯೆ:ವಿತಾವಿ/ಶೈಕ್ಷಣಿಕ/2018-19/ಎ-6/5677 ದಿ:25-09-2018

******

1) **ಬೆಂಗಳೂರಿನ ಬೆಂಗಳೂರು ಶ್ರೀ ವೆಂಕಟೇಶ್ವರ ಕಾಲೇಜ್ ಆಫ್ ಇಂಜಿನಿಯರಿಂಗ್ ಕಾಲೇಜಿನಲ್ಲಿ** ಈಗಾಗಲೇ ಅಸ್ತಿತ್ವದಲ್ಲಿರುವ ಸ್ನಾತಕ/ಸ್ನಾತಕೋತ್ತರ **ಕೋರ್ಸುಗಳಿಗೆ 2015-16 ರಿಂದ 2020-21 ಸಾಲಿನವರೆಗೆ** ಶಾಶ್ವತ ಸಂಯೋಜನೆಯನ್ನು ಮಂಜೂರು ಮಾಡುವ ಬಗ್ಗೆ ಉಲ್ಲೇಖಿತ ಪತ್ರದಲ್ಲಿ ಪ್ರಸ್ತಾಪಿಸಿರುವ ಹಿನ್ನೆಲೆಯಲ್ಲಿ, ಸಂವೀಕ್ಷಿಸಲಾಗಿದೆ.

2) **ಇದೇ ಸಮಸಂಖ್ಯೆಯ ದಿನಾಂಕ:06-12-2018 ರಂದು ನೀಡಿದ ನಿರ್ದೇಶನ ಪತ್ರವನ್ನು ಹಿಂಪಡೆಯಲಾಗಿದೆ.**

3) ಮುಂದುವರಿದು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಅಧಿನಿಯಮ 1994ರ ಪ್ರಕರಣ 40(6)ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ **ಬೆಂಗಳೂರಿನ ಶ್ರೀ ವೆಂಕಟೇಶ್ವರ ಕಾಲೇಜ್ ಆಫ್ ಇಂಜಿನಿಯರಿಂಗ್ ಕಾಲೇಜಿನಲ್ಲಿ** ಈಗಾಗಲೇ ಅಸ್ತಿತ್ವದಲ್ಲಿರುವ ಈ ಕೆಳಕಂಡ ಕೋರ್ಸುಗಳಿಗೆ ಅದರ ಮುಂದೆ ನಮೂದಿಸಿರುವ ಸಾಲುಗಳಿಗೆ ಅನ್ವಯವಾಗುವಂತೆ **ಶಾಶ್ವತ ಸಂಯೋಜನೆಯನ್ನು** ಮಂಜೂರು ಮಾಡುವಂತೆ ಶಿಫಾರಸ್ಸು ಮಾಡಲು ನಿರ್ದೇಶಿತನಾಗಿದ್ದೇನೆ.

| **ಸ್ನಾತಕ/ಸ್ನಾತಕೋತ್ತರ ಕೋರ್ಸುಗಳು** | **ಶಾಶ್ವತ ಸಂಯೋಜನಾ ಅವಧಿ** |
|---|---|
| 1. B.E. in Computer Science & Engg. | 2015-16 ರಿಂದ 2020-21 ರವರೆಗೆ |
| 2. B.E. in Electronics & Communication Engg. | 2016-17 ರಿಂದ 2021-22 ರವರೆಗೆ |
| 3. B.E. in Civil Engg. | |
| 4. B.E. in Mechanical Engg. | |
| 5. B.E. Electrical & Electronics Engg. | |
| 6. B.E. in Information Science & Engg. | |

4) ಮೇಲ್ಕಂಡ ಶಾಶ್ವತ ಸಂಯೋಜನೆಯು ಕೆಳಕಂಡ ಷರತ್ತುಗಳಿಗೆ ಒಳಪಟ್ಟಿರುತ್ತದೆ.

ಷರತ್ತುಗಳು:

1. ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;
2 ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;
3 ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಲಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದ ಯುತವಾಗಿ ಕಾಣತಕ್ಕದ್ದು.
4 ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.
5 ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯ ಅಂಕಪಟ್ಟ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ, ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;
6 ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;
7 ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ.
9 ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ.
10 ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ತಮ್ಮ ನಂಬುಗೆಯ,

(ಎನ್. ವೀರಬ್ರಹ್ಮಚಾರಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-1).

ಪ್ರತಿ:-

ಪ್ರಾಂಶುಪಾಲರು, ಶ್ರೀ ವೆಂಕಟೇಶ್ವರ ಕಾಲೇಜ್ ಆಫ್ ಇಂಜಿನಿಯರಿಂಗ್, ವಿದ್ಯಾನಗರ, ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ರಸ್ತೆ, ಬೆಂಗಳೂರು - 562157.